1	2		3
7.	ಚಿಕ್ಕೋಡಿ	–	5160
8.	ಅಥಣಿ	–	4039
9.	ರಾಯಬಾಗ್	–	2995
10.	ರಾಮದುರ್ಗ	–	2148
	ಒಟ್ಟು		**37925**

ಇ) ಇಲ್ಲ ಈಗಾಗಲೇ ಬೈಲಹೊಂಗಲ ತಾಲ್ಲೂಕಿನಲ್ಲಿ 3289 ಹಾಗೂ ಸವದತ್ತಿ ತಾಲ್ಲೂಕಿನಲ್ಲಿ 2900 ಫಲಾನುಭವಿಗಳಿಗೆ ಅಂತ್ಯೋದಯ ಅನ್ನ ಪಡಿತರ ಚೀಟಿಯನ್ನು ವಿತರಿಸಲಾಗಿದ್ದು, ಈ ಯೋಜನೆಯ ಸೌಲಭ್ಯವನ್ನು ಪಡೆಯುತ್ತಿದ್ದಾರೆ.

ಈ) ಉದ್ಭವಿಸುವುದಿಲ್ಲ.

ಉ) ರಾಜ್ಯದಲ್ಲಿ ಈಗಿರುವ 4,79,700 ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಗಳ ಜೊತೆಗೆ ಕೇಂದ್ರಸರ್ಕಾರವು ಹೊಸದಾಗಿ 2,40,000 ಅಂತ್ಯೋದಯ ಅನ್ನ ಯೋಜನೆಯ ಫಲಾನುಭವಿಗಳಿಗೆ ವಿಸ್ತರಿಸಲು ಉದ್ದೇಶಿಸಿದೆ. ಈ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ನಡೆದಿದೆ.

ಬೈಲಹೊಂಗಲ ತಾಲ್ಲೂಕಿನ ರಸ್ತೆ ಹಾಗೂ ಸಮುದಾಯ ಭವನ ಕಾಮಗಾರಿ

3195 (3695) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 14.2.2003ರಂದು ಬೆಳಗಾವಿಯಲ್ಲಿ ನಡೆದ ಸಭೆಯಲ್ಲಿ ನಿರ್ಣಯಿಸಿದ ಪ್ರಕಾರ ಮಲಪ್ರಭಾ ಯೋಜನೆಯ ಮುಳುಗಡೆ ಪ್ರದೇಶದ ಜನ ಅನುಕೂಲತೆಗಾಗಿ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ರಸ್ತೆ ಹಾಗು ಸಮುದಾಯ ಭವನ ಕಟ್ಟುವ ಕೆಲಸಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೆ;

ಆ) ಈ ಕೆಲಸಗಳು ಈಗ ಯಾವ ಹಂತದಲ್ಲಿವೆ;

ಇ) ಇನ್ನು ಎಷ್ಟು ದಿನಗಳೊಳಗಾಗಿ ಈ ಕೆಲಸಗಳನ್ನು ಮಾಡಿ ಮುಗಿಸಲಾಗುವುದು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು)

ಅ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಅವಶ್ಯವಿರುವ ಕೆಲಸಗಳನ್ನು ತೆಗೆದುಕೊಳ್ಳುವ ಕುರಿತಂತೆ ರೂ.40 ಲಕ್ಷಗಳ ಮತ್ತು ರೂ.35 ಲಕ್ಷಗಳ ಕಾಮಗಾರಿಗಳನ್ನು 4701 ಲೆಕ್ಕ ಶೀರ್ಷಿಕೆಯಡಿಯಲ್ಲಿ 2003–04ನೇ ಸಾಲಿನಲ್ಲಿ ಕರ್ನಾಟಕ ನೀರಾವರಿ ನಿಗಮ ನಿಯಮಿತದ ವಾರ್ಷಿಕ ಕಾರ್ಯಕ್ರಮ ಪಟ್ಟಿಯಲ್ಲಿ ಸೇರಿಸಲಾಗಿದೆ.

ಆ) ಪ್ರಸ್ತಾವನೆಗಳನ್ನು 2003–04ನೇ ಸಾಲಿನ ವಾರ್ಷಿಕ ಕಾರ್ಯಕ್ರಮ ಪಟ್ಟಿಯಲ್ಲಿ ಸೇರಿಸಿದ್ದು, ಕರ್ನಾಟಕ ನೀರಾವರಿ ನಿಗಮ ನಿಯಮಿತದ ಪರಿಶೀಲನೆಯಲ್ಲಿರುತ್ತದೆ.

ಇ) ಕರ್ನಾಟಕ ನೀರಾವರಿ ನಿಗಮ ನಿಯಮಿತದ ಅನುದಾನದ ನೆರವಿನಲ್ಲಿ ಕೈಗೊಳ್ಳಲಾಗುವುದು.

ಮಲಪ್ರಭಾನದಿಗೆ ಬ್ರಿಜ್ ಕಂ ಬಾಂದರು ನಿರ್ಮಾಣ

3196 (3696) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?